## 96. ಪರಿಹಾರ ಧನ ವಿಳಂಬ ಬೇಡ

ಆಟೋ ಮತ್ತು ಟ್ಯಾಕ್ಸಿ ವಾಹನ ಚಾಲಕರಿಗೆ ರೂ.5,000ಗಳ ಪರಿಹಾರ ಧನ ಒದಗಿಸಲು ಅಗತ್ಯವಿರುವ ಎಲ್ಲಾ ಕ್ರಮ ವಹಿಸಬೇಕು ಹಾಗೂ ಪರಿಹಾರ ಧನ ವಿತರಣೆಯಲ್ಲಿ ಯಾವುದೇ ವಿಳಂಬವಾಗಬಾರದು ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಸೂಚಿಸಿದ್ದಾರೆ.

ಸಾರಿಗೆ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು ರಿಕ್ಷಾ ಹಾಗೂ ಟ್ಯಾಕ್ಸಿ ಚಾಲಕರಿಂದ ಪರಿಹಾರ ಧನಕ್ಕೆ ಈಗಾಗಲೇ ಒಟ್ಟು 1,98,929 ಅರ್ಜಿಗಳು ಸ್ವೀಕೃತವಾಗಿದ್ದು, ವಾಹನ ಚಾಲಕರ ಬ್ಯಾಂಕ್ ಖಾತೆಗೆ ಪರಿಹಾರ ಮೊತ್ತ ಜಮಾ ಪ್ರಕ್ರಿಯೆ ಚಾಲ್ತಿಯಲ್ಲಿದೆ ಎಂದು ಅಧಿಕಾರಿಗಳು ತಿಳಿಸಿದರು.

ಕೊರೋನಾ ಹಿನ್ನೆಲೆಯಲ್ಲಿ ಪ್ರಯಾಣಿಕರು ಸಾರಿಗೆ ಸಂಸ್ಥೆ ಬಸ್ಸುಗಳನ್ನು ಬಳಸಲು ಹಿಂಜರಿಯುತ್ತಿದ್ದು, ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಕರ ಸಂಖ್ಯೆಯನ್ನು ಹೆಚ್ಚಿಸಲು ಸಾರ್ವಜನಿಕರಲ್ಲಿ ಆತ್ಮವಿಶ್ವಾಸ ಮೂಡಿಸಬೇಕು. ಸಾರಿಗೆ ಇಲಾಖೆಯ ವಾಹನಗಳನ್ನು ಸೂಕ್ತ ರೀತಿಯಲ್ಲಿ ಸ್ವಚ್ಛಗೊಳಿಸುವ ಕೆಲಸವೂ ಆಗಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದರು ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ ಕೊರೋನಾದಿಂದಾಗಿ ರಾಜಸ್ವ ಸಂಗ್ರಹ ಕುಂಠಿತವಾಗಿದೆ. ಉಂಟಾಗಿರುವ ನಷ್ಟವನ್ನು ಮುಂದಿನ ದಿನಗಳಲ್ಲಿ ಸರಿದೂಗಿಸುವಂತೆ ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಸೂಚಿಸಿದರು. ಈ ವೇಳೆ ಮುಖ್ಯಮಂತ್ರಿಗಳು ಕೋವಿಡ್-19 ಹಿನ್ನೆಲೆಯಲ್ಲಿ ಸಾರಿಗೆ ಇಲಾಖೆ ಕೈಗೊಂಡ ಕ್ರಮಗಳ ಕುರಿತ ವಿಡಿಯೋ ವೀಕ್ಷಿಸಿದ ನಂತರ ಸಾರಿಗೆ ಸಂಪದ ಸಂಚಿಕೆಯನ್ನು ಬಿಡುಗಡೆ ಮಾಡಿದರು.

ಉಪ ಮುಖ್ಯಮಂತ್ರಿ ಸಚಿವ ಲಕ್ಷ್ಮಣ ಸವದಿ, ಈಶಾನ್ಯ ಸಾರಿಗೆ ಸಂಸ್ಥೆ ಅಧ್ಯಕ್ಷ ವಿ.ಎಸ್. ಪಾಟೀಲ್, ಬಿಎಂಟಿಸಿ ಅಧ್ಯಕ್ಷ ನಂದೀಶ್ ರೆಡ್ಡಿ, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್, ಸಾರಿಗೆ ಇಲಾಖೆ ಪ್ರಧಾನ ಕಾರ್ಯದರ್ಶಿ ಅಜುಂ ಪರ್ವೇಜ್, ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕಿ ಸಿ.ಶಿಖಾ, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಐಎಸ್‌ಎನ್ ಪ್ರಸಾದ್ ಉಪಸ್ಥಿತರಿದ್ದರು.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ: 04.06.2020